ದಿನಾಂಕಃ **10-03-2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ವಾದಿ ಪರ ವಕೀಲರಿಂದ,

ಸಾಕ್ಷಿಯು ತನ್ನ ಮುಂದುವರೆದ ಮುಖ್ಯ ವಿಚಾರಣೆಯ ಪ್ರತಿಜ್ಞಾಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯವೆಲ್ಲಾ ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದೆಂದು ಪ್ರಮಾಣಿಸಿ ಹೇಳಿರುತ್ತಾರೆ.

1) ದಿಃ 20-09-2021 ರಂದು ಪ್ರತಿವಾದಿಗಳು ಬರೆದುಕೊಟ್ಟಿರುವ ಕರಾರು ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 1 ಎಂದು ಗುರುತಿಸಲಾಯಿತು.

2) ಹಂಪಾಪುರ ಗ್ರಾಮದ ಸರ್ವೇ ನಂ. 342 ಆಸ್ತಿಯ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 2 ಎಂದು ಗುರುತಿಸಲಾಯಿತು.

3) ದಿಃ 17-08-2022 ರಂದು ನಾನು ಪ್ರತಿವಾದಿಗಳಿಗೆ ವಕೀಲರ ಮೂಲಕ ಕಳುಹಿಸಿರುವ ತಿಳುವಳಿಕೆ ಪತ್ರದ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 3 ಎಂದು ಗುರುತಿಸಲಾಯಿತು.

4) ದಿಃ 22/08/2022 ರಂದು ಪ್ರತಿವಾದಿಗಳು ವಕೀಲರ ಮೂಲಕ ಕಳುಹಿಸುವ ಪ್ರತ್ಯುತ್ತರ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 4 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ವಿಚಾರಣ ಮಾಡಲು ಕಾಲಾವಕಾಶ ಕೋರಿರುತ್ತಾರೆ ಆದ್ದರಿಂದ ಪಾಟೀ ಸವಾಲು ವಿಚಾರಣೆಗಾಗಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ